**<u>ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಎಂ ನಾಗರಾಜು ರವರು ಶೂನ್ಯ ವೇಳೆ ಪ್ರಸ್ತಾಪಕ್ಕೆ ಜೀವಿಪರಿಸ್ಥಿತಿ ಮತ್ತು ಪರಿಸರ ವಿಭಾಗದ ಉತ್ತರ:</u>**

**ವಿಷಯ:**

"ಅನಿಯಂತ್ರಿತ ಪ್ರವಾಸೋದ್ಯಮ, ಹೆಚ್ಚುತ್ತಿರುವ ಅಭಿವೃದ್ಧಿ ಚಟುವಟಿಕೆಗಳಿಂದ ಕರ್ನಾಟಕದ ಪಶ್ಚಿಮ ಘಟ್ಟ ಮತ್ತಷ್ಟು ಅಪಾಯದ ಸನ್ನಿವೇಶ ಎದುರಿಸುತ್ತಿದೆ" ಕಂದಾಯ ಮತ್ತು ವಿಪತ್ತು ನಿರ್ವಹಣೆ ವಿಭಾಗವು ರಾಜ್ಯ ಸರ್ಕಾರಕ್ಕೆ ಈ ಸಂಬಂಧ ವರದಿ ಸಲ್ಲಿಸಿದ್ದು, ಈಗಲೇ ಎಚ್ಚೆತ್ತುಕೊಳ್ಳದಿದ್ದರೆ ಪಶ್ಚಿಮ ಘಟ್ಟದಲ್ಲಿ ಮುಂದಿನ ದಿನಗಳಲ್ಲಿ ಮತ್ತಷ್ಟು ಅಪಾಯ ಸಂಭವಿಸಲಿದೆ ಎಂದು ಎಚ್ಚರಿಕೆ ನೀಡಿದೆ.

ಪಶ್ಚಿಮ ಘಟ್ಟ ಕಳೆದ 19 ವರ್ಷಗಳಲ್ಲಿ 1,403 ಭೂಕುಸಿತಗಳನ್ನು ಕಂಡಿದ್ದು, 99 ಜನರು ಮೃತಪಟ್ಟಿದ್ದಾರೆ. ಅಭಿವೃದ್ಧಿ ಹೆಸರಿನಲ್ಲಿ ಅವೈಜ್ಞಾನಿಕವಾಗಿ ಗುಡ್ಡಗಳನ್ನು ಕಡಿದಿರುವುದು, ರಸ್ತೆ ವಿಸ್ತರಣೆಗಾಗಿ ಆಗಿರುವ ಭೂಭಾಗದ ವ್ಯತ್ಯಾಸ, ಮಣ್ಣಿನ ಸವಕಳಿ, ಸಣ್ಣ ತೊರೆಗಳಿಂದ ಸೃಷ್ಟಿಯಾಗಿರುವ ಇಳಿವಾರು, ಮಾನವ ನಿರ್ಮಿತ ಒತ್ತಡಗಳಿಂದಾಗಿ ಭೂಕುಸಿತ ಪ್ರಮಾಣ ಗಣನೀಯವಾಗಿ ಏರಿಕೆಯಾಗಿದೆ. ಅಲ್ಲದೆ, ಪಶ್ಚಿಮ ಘಟ್ಟದ ಎಂಟು ಜಿಲ್ಲೆಗಳ ವ್ಯಾಪ್ತಿಯ 31,231 ಚ.ಕಿ.ಮೀ. ಪ್ರದೇಶದಲ್ಲಿ ಭೂಕುಸಿತದ ಅಪಾಯವಿದೆ ಎಂದು ವರದಿಯಲ್ಲಿ ಹೇಳಲಾಗಿದೆ" ಎಂದು ದಿನಪತ್ರಿಕೆಯಲ್ಲಿ ಪ್ರಕಟವಾಗಿದ್ದು, ಪ್ರಯುಕ್ತ ಸದರಿ ಪಶ್ಚಿಮ ಘಟ್ಟದಲ್ಲಿ ಇನ್ನೂ ಮುಂದೆಯಾದರೂ "ಅಭಿವೃದ್ಧಿ ಹೆಸರಿನಲ್ಲಿ ಅವೈಜ್ಞಾನಿಕವಾಗಿ ಕಾಮಗಾರಿಗಳನ್ನು ತಡೆಗಟ್ಟುವ" ಕುರಿತು ಮಾನ್ಯ ಅರಣ್ಯ, ಜೀವಿಶಾಸ್ತ್ರ, ಮತ್ತು ಪರಿಸರ ಸಚಿವರನ್ನು ಒತ್ತಾಯಿಸುತ್ತೇನೆ.

**<u>ಉತ್ತರ:</u>**

ಕರ್ನಾಟಕದ ಪಶ್ಚಿಮ ಘಟ್ಟ ಪ್ರದೇಶಗಳಲ್ಲಿನ ಅರಣ್ಯ ಮತ್ತು ವನ್ಯಜೀವಿಗಳಿಗೆ ಸಂಬಂಧಿಸಿದ ಎಲ್ಲಾ ಚಟುವಟಿಕೆಗಳನ್ನು ಕರ್ನಾಟಕ ಅರಣ್ಯ ಕಾಯಿದೆ, ಕರ್ನಾಟಕ ಅರಣ್ಯ ನಿಯಮಗಳು ಮತ್ತು ವನ್ಯಜೀವಿ ಸಂರಕ್ಷಣಾ ಕಾಯಿದೆ ಅಡಿಯಲ್ಲಿ ನಿಯಂತ್ರಿಸಲಾಗುತ್ತಿದ್ದು, ಸದರಿ ಕಾಯ್ದೆ ಮತ್ತು ನಿಯಮಗಳನ್ವಯ ಕಾರ್ಯನಿರ್ವಹಿಸಲಾಗುತ್ತಿದೆ.

ವೈಜ್ಞಾನಿಕ ರೀತಿಯಲ್ಲಿ ಕೈಗೊಳ್ಳಬೇಕಾದ ಅಭಿವೃದ್ಧಿ ಚಟುವಟಿಕೆಗಳನ್ನು ಒಳಗೊಂಡಂತೆ Vana Samrakshan Evam Samvardhan Adhiniyam ನಿಬಂಧನೆಗಳಿಂದ ನಿಯಂತ್ರಿಸಲಾಗುತ್ತಿದೆ. ಸಂರಕ್ಷಿತ ಪ್ರದೇಶಗಳ ಸುತ್ತಲಿನ ಪ್ರದೇಶಗಳಿಗೆ ಪರಿಸರ-ಸೂಕ್ಷ್ಮ ವಲಯಕ್ಕೆ ಸಂಬಂಧಿಸಿದಂತೆ ನಿಯಮಗಳ ಮಾರ್ಗಸೂಚಿಗಳನ್ನು ಅನ್ವಯಿಸಿ ಕಾರ್ಯನಿರ್ವಹಿಸಲಾಗುತ್ತಿದೆ. ಸಂರಕ್ಷಿತ ಪ್ರದೇಶಗಳ ಒಳಗೆ, ವಿಶೇಷವಾಗಿ ಹುಲಿ ಮೀಸಲು ಪ್ರದೇಶದಲ್ಲಿ ಪ್ರವಾಸೋದ್ಯಮವನ್ನು ಸಾಮರ್ಥ್ಯದ ಅನುಗುಣವಾಗಿ ಮತ್ತು ಪರಿಸರ-ಪ್ರವಾಸೋದ್ಯಮದ ತತ್ವದ ಆಧಾರದ ಮೇಲೆ ನಿಯಂತ್ರಿಸಲಾಗುತ್ತಿದೆ.

2024ನೇ ಸಾಲಿನ ಮಳೆಗಾಲದಲ್ಲಿ ಉತ್ತರ ಕನ್ನಡ ಜಿಲ್ಲೆಯಲ್ಲಿ ಒಟ್ಟು 69 ಕಡೆ ಒಟ್ಟು 29.6134 ಹೆ. ಪ್ರದೇಶದಲ್ಲಿ ಭೂ ಕುಸಿತ ಉಂಟಾಗಿರುತ್ತದೆ. ಜಿಲ್ಲೆಯಲ್ಲಿ 2024 ನೇ ಸಾಲಿನಲ್ಲಿ 5292 ಶೇಕಡಾವಾರು 50% ರಷ್ಟು ಹೆಚ್ಚು ಮಳೆ ಆಗಿರುವುದು ಕಂಡುಬಂದಿರುತ್ತದೆ. ಈ ರೀತಿ ಸುರಿದ ಬಾರಿ ಮಳೆಯಿಂದಾಗಿ ಹಾಗೂ ರಾಷ್ಟ್ರೀಯ ಹೆದ್ದಾರಿ ನಿರ್ಮಾಣ ಕಾಮಗಾರಿಯನ್ನು ಅವೈಜ್ಞಾನಿಕವಾಗಿ ಮಾಡಿದ್ದರಿಂದಾಗಿ ಭೂಕುಸಿತ ಉಂಟಾಗಿರುತ್ತದೆ.

ರಾಷ್ಟ್ರೀಯ ಹೆದ್ದಾರಿ ನಿರ್ಮಾಣ ಕಾಮಗಾರಿಯನ್ನು ಅವೈಜ್ಞಾನಿಕವಾಗಿ ಮಾಡಿದ್ದರಿಂದ ಕಾರವಾರ ವಿಭಾಗದ ಶಿರೂರು ಅರಣ್ಯ ಸರ್ವೆ ನಂ. 169ಎ1ಎ1 ಹಾಗೂ ಕೊಡ್ಡಣಿ ಅರಣ್ಯ ಸರ್ವೆ ನಂ: 25 ರಲ್ಲಿ ಭೂ ಕುಸಿತ ಉಂಟಾಗಿ ಅಂದಾಜು ಒಂದು ಎಕರೆ ಅರಣ್ಯ ಪ್ರದೇಶ ಹಾನಿಯಾಗಿ ನೆಡುತೋಪಿಗೆ ನಿರ್ಮಿಸಿದ ಬೇಲಿ ಹಾಗೂ ಸಸ್ಯಸಂಕುಲ ನಾಶವಾದ ಬಗ್ಗೆ ಕರ್ನಾಟಕ ಅರಣ್ಯ ಕಾಯ್ದೆ 1963 ಸೆಕ್ಷನ್ 24 (h) (g) ರ ಉಲ್ಲಂಘನೆ ಶಿಕ್ಷಾರ್ಹ ಅಪರಾಧ ಹಾಗೂ U(SES)A 1980 U/s 3-8 ರ

ಉಲ್ಲಂಘನೆ ಕುರಿತು ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ಹಾಗೂ IRB ಸಂಸ್ಥೆಯವರ ವಿರುದ್ಧ ವಲಯ ಅರಣ್ಯಾಧಿಕಾರಿ, ಅಂಕೋಲಾ ರವರ FOC No: 01/2024-25 ದಿನಾಂಕ:17-07-2024 ರಂತೆ ಗುನ್ನ ಪ್ರಕರಣವನ್ನು ದಾಖಲಿಸಲಾಗಿರುತ್ತದೆ ಹಾಗೂ ಪ್ರಕರಣವು ವಿಚಾರಣಾ ಹಂತದಲ್ಲಿರುತ್ತದೆ.

ಶಿರಸಿ ವಿಭಾಗದ ದೇವಿಮನೆ ಶಾಖೆಯಲ್ಲಿ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದವರು ರಸ್ತೆ, ಅಗಲೀಕರಣವನ್ನು ಅವೈಜ್ಞಾನಿಕವಾಗಿ ಕೈಗೊಂಡ ಸಮಯದಲ್ಲಿ ಅರಣ್ಯ ಸರ್ವೇ ನಂ: 30 ರಲ್ಲಿ 0.2 ಹೆ. ಅರಣ್ಯ ಪ್ರದೇಶ ಭೂಕುಸಿತವಾಗಿರುತ್ತದೆ. ಈ ಬಗ್ಗೆ ಕಾನೂನಿನಂತೆ ಪ್ರಥಮ ಮಾಹಿತಿ : ವರದಿ ಸಂಖ್ಯೆ: 07ಎ ದಿನಾಂಕ: 17/07/2024ರಲ್ಲಿ ಕರ್ನಾಟಕ ಅರಣ್ಯ ಕಾಯ್ದೆ 1963 ಸೆಕ್ಷನ್ 24 (h)(g) ರ ಉಲ್ಲಂಘನೆ ಶಿಕ್ಷಾರ್ಹ ಅಪರಾಧ ಕುರಿತು ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ಹಾಗೂ RNS ಸಂಸ್ಥೆಯವರ ವಿರುದ್ಧ ವಲಯ ಅರಣ್ಯಾಧಿಕಾರಿ, ಜಾನ್ಮನೆ ರವರು ಪ್ರಕರಣ ದಾಖಲಿಸಿ ಕ್ರಮ ಕೈಗೊಳ್ಳಲಾಗಿರುತ್ತದೆ.

ಈ ಕುರಿತು ಸರ್ಕಾರದ ಆದೇಶ ಸಂಖ್ಯೆ: PWD 169 CNH 2024 (E) ಬೆಂಗಳೂರು ದಿನಾಂಕ: 02-12-2024 ರಂತೆ ಭೂ ಕುಸಿತ ಆಗಬಹುದಾದಂತಹ ಪ್ರದೇಶಗಳ ವಸ್ತುಸ್ಥಿತಿ, ಕಾರಣಗಳು ಹಾಗೂ ಭೂ ಕುಸಿತ ತಡೆಗಟ್ಟಲು ಕ್ರಮಗಳ ಬಗ್ಗೆ ರಾಜ್ಯಮಟ್ಟದ ಸಮಿತಿಯನ್ನು ರಚಿಸಲಾಗಿರುತ್ತದೆ. ಸದರಿ ಸಮಿತಿಯಲ್ಲಿ ಕೈಗೊಳ್ಳುವ ನಿರ್ಧಾರಕ್ಕೆ ಅನುಸಾರವಾಗಿ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರವು ಮುಂದಿನ ಕ್ರಮಕೈಗೊಳ್ಳಬೇಕಾಗಿರುತ್ತದೆ. ಮುಂದುವರಿದು, ಜಿಲ್ಲೆಯಲ್ಲಿ 2024ನೇ ಸಾಲಿನಲ್ಲಿ ಮೇಘ ಸ್ಫೋಟದಿಂದ ಸುರಿದ ಮಳೆಯಿಂದಾಗಿ ಅರಣ್ಯ ಪ್ರದೇಶದಲ್ಲಿ ಭೂಕುಸಿತ ಸಂಭವಿಸಿರುತ್ತದೆ.

**ಸಂಖ್ಯೆ:** ಅಪಜೀ 51 ಇಎನ್‌ವಿ 2025

**(ಈಶ್ವರ ಬಿ. ಖಂಡ್ರೆ)**
ಅರಣ್ಯ, ಜೀವಿಪರಿಸ್ಥಿತಿ ಮತ್ತು ಪರಿಸರ ಸಚಿವರು